ಕ್ರಮವಾಗಿ ಕೋಳಿ ಫಾರ್ಮ್‌ಗಳಲ್ಲಿ ಜೈವಿಕ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಳ್ಳಲು ಮಾಲೀಕರಿಗೆ ತಿಳುವಳಿಕೆ ನೀಡಲಾಗಿದೆ.

ಈ) ಈ ಫಾರ್ಮ್‌ಗಳಿಂದ ಅತೀ ಹೆಚ್ಚು ಮೊಟ್ಟೆಗಳು ರಫ್ತಾಗುತ್ತಿದ್ದು, ಇದರಿಂದಾಗಿ ಈ ಕೇಂದ್ರಗಳಿಂದ ಸರ್ಕಾರಕ್ಕೆ ಸಂಗ್ರಹಣೆಯಾಗಿರುವ ಮೊತ್ತವೆಷ್ಟು?

ಕೊಪ್ಪಳ ಜಿಲ್ಲೆಯ ಕೋಳಿ ಸಾಕಾಣಿಕಾ ಕೇಂದ್ರಗಳಿಂದ ಪ್ರತಿದಿನ ಸುಮಾರು 30.00 ಲಕ್ಷ ಮೊಟ್ಟೆಗಳು ಇತರೆ ರಾಜ್ಯಗಳಿಗೆ ಹಾಗೂ ರಾಜ್ಯದ ಇತರೆ ನಗರ ಪಟ್ಟಣಗಳಿಗೆ ಸರಬರಾಜಾಗುತ್ತಿದೆ. ಈ ಕೋಳಿ ಫಾರ್ಮ್‌ಗಳ ಮೊಟ್ಟೆ ಉತ್ಪಾದನೆ ಸರಬರಾಜು ಹಾಗೂ ಮಾರಾಟದಿಂದ ಸರ್ಕಾರಕ್ಕೆ ಯಾವುದೇ ರೀತಿಯ ಮೊತ್ತ ಸಂಗ್ರಹಣೆ ಮಾಡಲಾಗುತ್ತಿಲ್ಲ. ಆದರೆ ಈ ಕೋಳಿ ಫಾರ್ಮ್‌ಗಳಿಂದ ಪರೋಕ್ಷವಾಗಿ ಗ್ರಾಮೀಣ ಪ್ರದೇಶದ ಜನರಿಗೆ ಉದ್ಯೋಗ ಅವಕಾಶ ಮತ್ತು ರೈತರು ಬೆಳೆಯುವ ಮೆಕ್ಕೆಜೋಳ ಹಾಗೂ ಇತರೆ ಕೃಷಿ ಉತ್ಪನ್ನಗಳಿಗೆ ಮಾರುಕಟ್ಟೆ ದೊರೆಯುತ್ತಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (471)306
ಸದಸ್ಯರ ಹೆಸರು : ಶ್ರೀ ಕರಡಿ ಸಂಗಣ್ಣ ಅಮರಪ್ಪ
ಉತ್ತರಿಸಬೇಕಾದ ಸಚಿವರು : (ಶ್ರೀ ಅರವಿಂದ ಲಿಂಬಾವಳಿ)
: ಉನ್ನತ ಶಿಕ್ಷಣ ಸಚಿವರು

ಅ) ಕರ್ನಾಟಕ ರಾಜ್ಯ ಪದವಿ ಕಾಲೇಜುಗಳ ತಾತ್ಕಾಲಿಕ ಉಪನ್ಯಾಸಕರಿಗೆ ಪ್ರತಿ ತಿಂಗಳ ವೇತನವು ವಿತರಣೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ತಾತ್ಕಾಲಿಕ ಉಪನ್ಯಾಸಕರ ವೇತನವು ವಿಳಂಬವಾಗಲು ಕಾರಣಗಳೇನು (ಜಿಲ್ಲಾವಾರು ವಿವರ ನೀಡುವುದು)

ಹೌದು

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2007–08ನೇ ಸಾಲಿನಲ್ಲಿ ನೇಮಕಾತಿಗೊಂಡ ಎಲ್ಲಾ ಅತಿಥಿ ಉಪನ್ಯಾಸಕರುಗಳಿಗೆ ಸದರಿ ಸಾಲಿನಲ್ಲಿ ಬಿಡುಗಡೆಯಾದ ಅನುದಾನದಲ್ಲಿ ಶೇ 22ರಷ್ಟು ವೇತನ ಬಿಡುಗಡೆ ಮಾಡಲಾಗಿತ್ತು. ಉಳಿದ ಮೊತ್ತವನ್ನು 2008–09ನೇ ಸಾಲಿಗೆ ಒದಗಿಸುವ ಅನುದಾನದಲ್ಲಿ ಬಿಡುಗಡೆ ಮಾಡಲಾಗುವುದು. (ಜಿಲ್ಲಾ–ವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ)

ಆ) ಕೊಪ್ಪಳ ಜಿಲ್ಲೆಯ ಪದವಿ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ತಾತ್ಕಾಲಿಕ ಉಪನ್ಯಾಸಕರು ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು)

87

ತಾಲ್ಲೂಕು–ವಾರು ವಿವರ ಈ ಕೆಳಕಂಡಂತಿದೆ:

- ಗಂಗಾವತಿ ತಾಲ್ಲೂಕು: – 37
- ಕೊಪ್ಪಳ ತಾಲ್ಲೂಕು: – 33

- ಕುಷ್ಟಗಿ ತಾಲ್ಲೂಕು: – 07
- ಯಲಬುರ್ಗಾ ತಾಲ್ಲೂಕು: –10

ಇ) ಕೊಪ್ಪಳ ಜಿಲ್ಲೆಯ ಪದವಿ ಕಾಲೇಜುಗಳಲ್ಲಿ ತಾತ್ಕಾಲಿಕ ಉಪನ್ಯಾಸಕರಾಗಿ ಸೇವೆ ಸಲ್ಲಿಸುತ್ತಿರುವವರಿಗೆ ಪ್ರತಿ ತಿಂಗಳು ವೇತನದಿಂದ ವಂಚಿತರಾದವರ ಸಂಖ್ಯೆ ಎಷ್ಟು?

87

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (467)307
ಸದಸ್ಯರ ಹೆಸರು : ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ)
ಉತ್ತರಿಸುವ ಸಚಿವರು : (ಶ್ರೀ ಕೆ.ಎಸ್.ಈಶ್ವರಪ್ಪ)
: ಇಂಧನ ಸಚಿವರು

****

ಅ) ಸರ್ಕಾರ ರೈತರಿಗೆ ಉಚಿತ ವಿದ್ಯುತ್ ನೀಡುವುದಾಗಿ ಭರವಸೆ ನೀಡಿರುವುದು ನಿಜವಲ್ಲವೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ಮುಂದಿನ ನಿಲುವೇನು?

ಹೌದು ನಿಜ. ರಾಜ್ಯದ ರೈತರ 10 ಹೆಚ್.ಪಿ.ಸಾಮರ್ಥ್ಯದವರೆಗಿನ ನೀರಾವರಿ ಪಂಪುಸೆಟ್ಟುಗಳಿಗೆ ಉಚಿತ ವಿದ್ಯುತ್ ಸೌಲಭ್ಯವನ್ನು ದಿನಾಂಕ 1–8–2008 ರಿಂದ ಜಾರಿಗೊಳಿಸಲಾಗುತ್ತದೆ ಎಂದು ದಿನಾಂಕ 17–7–2008 ರಂದು ಸದನದಲ್ಲಿ ಮಂಡಿಸಲಾದ 2008–09ರ ಆಯವ್ಯಯ ಭಾಷಣದಲ್ಲಿ ಘೋಷಿಸಲಾಗಿದೆ. ಅದರಂತೆ ಸರ್ಕಾರಿ ಆದೇಶ ಹೊರಡಿಸಲು ಕ್ರಮ ತೆಗೆದು ಕೊಳ್ಳಲಾಗುತ್ತಿದೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : (469)308
ಸದಸ್ಯರ ಹೆಸರು : ಶ್ರೀ ಕಿಮ್ಮನೆ ರತ್ನಾಕರ್ [ತೀರ್ಥಹಳ್ಳಿ]
ಉತ್ತರಿಸುವ ಸಚಿವರು : (ಶ್ರೀ ಅರವಿಂದಲಿಂಬಾವಳಿ)
: ಮಾನ್ಯ ಉನ್ನತ ಶಿಕ್ಷಣ ಸಚಿವರು

ಅ. ಕಳೆದ ಸಾಲಿನಲ್ಲಿ ಮತ್ತು ಪ್ರಸ್ತುತ ಸಾಲಿನಲ್ಲಿ ಪ್ರಾರಂಭಿಸಲಾದ ಪ್ರಥಮ ದರ್ಜೆ(ಪದವಿ) ಕಾಲೇಜುಗಳ ಸಂಖ್ಯೆ ಎಷ್ಟು;

ಕಳೆದ ಸಾಲಿನಲ್ಲಿ ಎಂದರೆ 2007–08ನೇ ಸಾಲಿಗೆ 167 ಹೊಸ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಗಳನ್ನು ಪ್ರಾರಂಭಿಸಲಾಗಿದೆ. ಪ್ರಸ್ತುತ ಸಾಲಿನಲ್ಲಿ ಎಂದರೆ 2008–09ನೇ ಸಾಲಿಗೆ ಯಾವುದೇ ಹೊಸ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳನ್ನು ಪ್ರಾರಂಭಿಸಿರುವುದಿಲ್ಲ.

ಆ. ಈ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಬಂದಿದೆ.